ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–288

**30 ಏಪ್ರಿಲ್ 2022 * ಶನಿವಾರ * ಸಂಜೆ 6.00**

**ರಾಜೇಂದ್ರ ಭವನ, ಜೆಎಸ್‌ಎಸ್ ಆಸ್ಪತ್ರೆ ಆವರಣ, ಮೈಸೂರು**

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

**ಅಧ್ಯಕ್ಷತೆ**

**ನಿ.ಪ್ರ.ಸ್ವ. ವಿದ್ವಾನ್ ಶ್ರೀ ಸಿದ್ಧಮಲ್ಲ ಸ್ವಾಮಿಗಳು**
ಶ್ರೀ ನೀಲಕಂಠಸ್ವಾಮಿ ಮಠ, ಮೈಸೂರು ಹಾಗೂ ಶ್ರೀ ಕಲ್ಮಠ, ಅಗರ

**ಉಪನ್ಯಾಸ**

**ನಿ.ಪ್ರ.ಸ್ವ. ಶ್ರೀ ಶ್ರೀಕಂಠ ಸ್ವಾಮಿಗಳು**
ಶ್ರೀ ವಿರಕ್ತಮಠ, ಮುಡಿಗುಂಡ, ಕೊಳ್ಳೇಗಾಲ ತಾ.

**ವಿಷಯ : ವಚನಗಳಲ್ಲಿ ವೈಚಾರಿಕ ನಿಲುವು**

**ವಚನ ಗಾಯನ**

**ಕು. ಎನ್. ಚೂಡಾಮಣಿ**
ಮೈಸೂರು

---

**ಪ್ರಾಯೋಜಕರು**

ಶ್ರೀಮತಿ ಎಸ್. ನಾಗಮ್ಮ ಷಡಕ್ಷರಿ
ಕುವೆಂಪುನಗರ, ಮೈಸೂರು

**ತಮಗೆ ಆದರದ ಸ್ವಾಗತ**

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕವೇ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ನಿ.ಪ್ರ.ಸ್ವ. ವಿದ್ವಾನ್ ಶ್ರೀ ಸಿದ್ಧಮಲ್ಲ ಸ್ವಾಮಿಗಳು** ಮೈಸೂರಿನ ಶ್ರೀ ನೀಲಕಂಠಸ್ವಾಮಿ ಮಠ ಹಾಗೂ ಅಗರ ಶ್ರೀ ಕಲ್ಮಠಗಳ ಅಧ್ಯಕ್ಷರಾಗಿದ್ದಾರೆ. ಶ್ರೀ ಸಿದ್ಧಗಂಗಾ ಮಠದ ಸಂಸ್ಕೃತ ಕಾಲೇಜಿನಲ್ಲಿ ಶಿಕ್ಷಣ ಪಡೆದು, ಮೈಸೂರಿನ ಮಹಾರಾಜ ಸಂಸ್ಕೃತ ಕಾಲೇಜಿನಲ್ಲಿ ಉನ್ನತ ವ್ಯಾಸಂಗ ಮಾಡಿ, ಅದೇ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಜಂಗಮ ಮಹತಿ, ಬಸವ ಪೂಜಾ ವಿಧಾನ ಕೃತಿಗಳನ್ನು ರಚಿಸಿದ್ದಾರೆ ಹಾಗೂ ಶೂನ್ಯ ಸಿಂಹಾಸನ ನಿರ್ಮಾಣ, ಕಲ್ಯಾಣ ಕನ್ನಡಿ, ಸುವರ್ಣ ಸಿಂಚನ ಕೃತಿಗಳನ್ನು ಶ್ರೀಮಠದಿಂದ ಹೊರತಂದಿದ್ದಾರೆ. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ. ರಾಜ್ಯ ಸರ್ಕಾರವು ಶ್ರೀಗಳಿಗೆ ಸಂಸ್ಕೃತ – ವೇದ ವಿದ್ವಾಂಸರ ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಿದೆ.

**ನಿ.ಪ್ರ.ಸ್ವ. ಶ್ರೀ ಶ್ರೀಕಂಠ ಸ್ವಾಮಿಗಳು** ಕೊಳ್ಳೇಗಾಲಕ್ಕೆ ಹೊಂದಿಕೊಂಡಂತಿರುವ ಮುಡಿಗುಂಡ ಶ್ರೀ ವಿರಕ್ತಮಠದ ಅಧ್ಯಕ್ಷರು. ಸ್ನಾತಕೋತ್ತರ ಪದವೀಧರರು. ವಚನ ಸಾಹಿತ್ಯದಲ್ಲಿ ಅಪಾರ ಆಸಕ್ತಿಯನ್ನು ಹೊಂದಿದ್ದಾರೆ. ಉತ್ತಮ ಉಪನ್ಯಾಸಕರು. ಸದಾ ಶರಣತತ್ತ್ವ ಚಿಂತನೆಯಲ್ಲಿ ತೊಡಗಿಸಿಕೊಂಡವರು. ಮಠವನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿಕೊಂಡು ಹೋಗುತ್ತಿದ್ದಾರೆ.

**ಶ್ರೀಮತಿ ಎಸ್. ನಾಗಮ್ಮ ಷಡಕ್ಷರಿಯವರು** ಚಾಮರಾಜನಗರ ತಾಲ್ಲೂಕು ನಂಜೇದೇವನಪುರದವರು. ಬಾಲ್ಯದಿಂದಲೂ ಅಧ್ಯಾತ್ಮದಲ್ಲಿ ಆಸಕ್ತಿಯನ್ನು ಹೊಂದಿರುವರು. ನಡೆ–ನುಡಿಯಲ್ಲಿ ಶರಣರ ಆಚಾರ–ವಿಚಾರಗಳನ್ನು ಮೈಗೂಡಿಸಿಕೊಂಡಿದ್ದಾರೆ. ಅನೇಕ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿ ಕೊಂಡಿದ್ದಾರೆ. ಇವರ ಪತಿ ಕಬ್ಬಹಳ್ಳಿಯ ದಿವಂಗತ ಶ್ರೀ ಷಡಕ್ಷರಿಯವರು ತೋಟಗಾರಿಕೆ ಇಲಾಖೆಯಲ್ಲಿ ಉಪನಿರ್ದೇಶಕರಾಗಿದ್ದರು. ಪುತ್ರ ಶ್ರೀ ಕೆ.ಎಸ್. ನಾಗೇಂದ್ರ ಪ್ರಸಾದ್ ಮತ್ತು ಪುತ್ರಿ ಶ್ರೀಮತಿ ಕೆ.ಎಸ್. ನಂದಾ.